ದೂರವಾಣಿ: 2419677/2419361
ಫ್ಯಾಕ್ಸ್: 0821-2419363/2419301

ಇ-ಮೇಲ್: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ : 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406
ಮೈಸೂರು-570 005

## ಸಂಯೋಜನೆ ವಿಸ್ತರಣಾ ಮಂಜೂರಾತಿ ಆದೇಶ
## (ವಿದ್ಯಾರ್ಥಿ ಪ್ರಮಾಣದ ಹೆಚ್ಚಳದ ಬಗ್ಗೆ)

ವಿಷಯ: 2019-20ನೇ ಶೈಕ್ಷಣಿಕ ಸಾಲಿನಿಂದ ಮೈಸೂರು ಜಿಲ್ಲೆಯ ಟಿ. ನರಸೀಪುರ ತಾ. ಭೈರಾಪುರದ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಬಿ.ಕಾಂ ಕೋರ್ಸಿಗೆ ಹೆಚ್ಚುವರಿ ವಿದ್ಯಾರ್ಥಿ ಪ್ರಮಾಣವನ್ನು ಮಂಜೂರು ಮಾಡುವ ಬಗೆಗೆ.

ಉಲ್ಲೇಖ:
1) ಪ್ರಾಂಶುಪಾಲರು ಅರ್ಜಿ ಸಲ್ಲಿಸಿರುವ ದಿನಾಂಕ 30.08.2018.
2) ಸ್ಥಳೀಯ ವಿಚಾರಣಾ ಸಮಿತಿ ಭೇಟಿ ನೀಡಿದ ದಿನಾಂಕ: 04.02.2019
3) ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ ದಿನಾಂಕ 14.03.2019
4) ಸಿಂಡಿಕೇಟ್ ಸಭೆಯ ನಿರ್ಣಯದ ದಿನಾಂಕ 14.03.2019
5) ಸರ್ಕಾರಕ್ಕೆ ಕಳುಹಿಸಿರುವ ಪ್ರಸ್ತಾವನೆ ಸಂಖ್ಯೆ ಸಿಡಿಸಿ-3/181/2019-20 ದಿನಾಂಕ 26.03.2019
6) ಸಂಯೋಜನಾ ಮುಂದುವರಿಕೆ ಮಂಜೂರಾತಿ ಆದೇಶ ಸಂಖ್ಯೆ ಸಿಡಿಸಿ-2/19/2019-20 ದಿನಾಂಕ 06.05.2019
7) ಸರ್ಕಾರದ ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಆದೇಶ ಸಂಖ್ಯೆ ಇಡಿ 11 ಯುಎಂವಿ 2019 ದಿನಾಂಕ 17.07.2019

* * * * *

## ಆದೇಶ ಸಂಖ್ಯೆ ಸಿಡಿಸಿ-2/19/2019-20 ದಿನಾಂಕ 25.07.2019

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ 59ನೇ ಪ್ರಕರಣದ (18)ನೇ ಉಪ ಪ್ರಕರಣದಡಿಯಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಉಲ್ಲೇಖ 7ರ ಆದೇಶದನ್ವಯ 2019-20ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ ಮೈಸೂರು ಜಿಲ್ಲೆಯ ಟಿ. ನರಸೀಪುರ ತಾ. ಭೈರಾಪುರದ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಿ.ಕಾಂ. ಕೋರ್ಸಿಗೆ ಹಾಲಿ ಇರುವ 60 ವಿದ್ಯಾರ್ಥಿ ಪ್ರಮಾಣಕ್ಕೆ ಹೆಚ್ಚುವರಿಯಾಗಿ 60 ವಿದ್ಯಾರ್ಥಿ ಪ್ರಮಾಣವನ್ನು ಹೆಚ್ಚಿಸಿ ಒಟ್ಟು 120 ವಿದ್ಯಾರ್ಥಿ ಪ್ರಮಾಣಕ್ಕೆ ತಾತ್ಕಾಲಿಕ ಸಂಯೋಜನಾ ಮಂಜೂರಾತಿ ಆದೇಶ ನೀಡಲಾಗಿದೆ.

| ಕೋರ್ಸುಗಳು | ಐಚ್ಛಿಕಗಳು | ವಿಭಾಗ | ವಿದ್ಯಾರ್ಥಿ ಪ್ರಮಾಣ |
|---|---|---|---|
| ಬಿ.ಕಾಂ | ವಿಶ್ವವಿದ್ಯಾನಿಲಯದ ಪರಿನಿಯಮಾವಳಿಯಂತೆ | 02 | 120 |

ವಿಶ್ವವಿದ್ಯಾನಿಲಯದ ಸ್ಥಳೀಯ ತನಿಖಾ ಸಮಿತಿ ಹಾಗೂ ಸರ್ಕಾರದ ಷರತ್ತುಗಳನ್ನು ತಪ್ಪದೇ ಪಾಲಿಸುವುದು ಮತ್ತು ಇದರ ಸಂಬಂಧ ಅನುಪಾಲನಾ ವರದಿಯನ್ನು ಸಮರ್ಪಕ ದಾಖಲಾತಿಗಳೊಡನೆ ಕಾಲೇಜು ಅಭಿವೃದ್ಧಿ ಮಂಡಳಿ ಕಛೇರಿಗೆ ತಲುಪಿಸುವುದು. ಪರೀಕ್ಷಾ ನಿಯಮ/ ಪ್ರವೇಶಾತಿ ಮತ್ತು ಮೀಸಲಾತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಸರ್ಕಾರ ವಿಧಿಸಿರುವ ಷರತ್ತುಗಳು:

1. ಮೇಲ್ಕಂಡ ಕಾಲೇಜು ವಿಶ್ವವಿದ್ಯಾನಿಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
2. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
3. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾನಿಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

ಪು.ತಿ.ನೋ.

4. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
5. ಮೇಲ್ಕಂಡ ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ಮೈಸೂರು ವಿಶ್ವವಿದ್ಯಾನಿಲಯದ ಖನಿಯಮಾವಳಿಗಳ ಪ್ರಕಾರ ಪಡೆಯತಕ್ಕದ್ದು.
6. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸ್‌ನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
7. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
8. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ವಿಶ್ವವಿದ್ಯಾನಿಲಯದ ಶೈಕ್ಷಣಿಕ ವೇಳಾಪಟ್ಟಿಯ ಪ್ರಕಾರ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದು. ವಿಶ್ವವಿದ್ಯಾನಿಲಯ ಹಾಗೂ ಸರ್ಕಾರದ ಷರತ್ತುಗಳನ್ನು ಕಾರ್ಯಗತ ಮಾಡಲು ಕಾರ್ಯಪ್ರವೃತ್ತರಾಗುವುದು ಹಾಗೂ ಈ ಸಂಬಂಧ ಅಗತ್ಯ ದಾಖಲೆಗಳೊಡನೆ ಅನುಪಾಲನಾ ವರದಿಯನ್ನು ಈ ಪತ್ರ ತಲುಪಿದ ಕೂಡಲೇ ಕಾಲೇಜು ಅಭಿವೃದ್ಧಿ ಮಂಡಳಿ ಕಛೇರಿಗೆ ಕಳುಹಿಸಲು ಕೋರಿದೆ. ಪರೀಕ್ಷಾ ನಿಯಮ/ ಪ್ರವೇಶಾತಿ / ಮೀಸಲಾತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಕುಲಸಚಿವ

ಗೆ,

ಪ್ರಾಂಶುಪಾಲರು
ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು
ಕಬಿನಿ ಕಾಲೋನಿ ಆವರಣ
ಬೈರಾಪುರ ಗ್ರಾಮ – 571124
ಟಿ. ನರಸೀಪುರ ತಾ., ಮೈಸೂರು ಜಿಲ್ಲೆ

ಪ್ರತಿಗಳು:

1) ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್.ಅಂಬೇಡ್ಕರ್ ರಸ್ತೆ, ಬೆಂಗಳೂರು–560 001.
2) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು–560 001.
3) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು–560 001.
4) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಜೆ.ಎಲ್.ಬಿ.ರಸ್ತೆ, ಮೈಸೂರು.
5) ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6) ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7) ಉಪಕುಲಸಚಿವರು (ಶೈಕ್ಷಣಿಕ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8) ಅಧೀಕ್ಷಕರು, ಸಿಡಿಸಿ/ಕಛೇರಿ ಪ್ರತಿ/ರಕ್ಷಾ ಕಡತಕ್ಕೆ.

Cont. order 19-20